# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 03/07/2019

# ರಾಜೀನಾಮೆಗೆ ಅಮಾವಾಸ್ಯೆ ಬ್ರೇಕ್!

**ವಿಕ ಸುದ್ದಿಲೋಕ** ಬೆಂಗಳೂರು

ಇಬ್ಬರು ಕಾಂಗ್ರೆಸ್ ಶಾಸಕರ ರಾಜೀನಾಮೆಯಿಂದ ಸಂಚಲನ ಉಂಟಾಗಿದ್ದ ರಾಜ್ಯ ರಾಜಕೀಯ ರಂಗದಲ್ಲಿ ಮಂಗಳವಾರ ಯಾವುದೇ ಮಹತ್ವದ ಬೆಳವಣಿಗೆಗಳು ಸಂಭವಿಸಲಿಲ್ಲ. ರಾಜೀನಾಮೆ ಪರ್ವಕ್ಕೆ ಅಮಾವಾಸ್ಯೆ ಬ್ರೇಕ್ ಹಾಕಿದೆ ಎನ್ನಲಾಗುತ್ತಿದೆ!

ಕಾಂಗ್ರೆಸ್‌ನ ಆನಂದ್ ಸಿಂಗ್ ಹಾಗೂ ರಮೇಶ್ ಜಾರಕಿಹೊಳಿ ಸೋಮವಾರ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಬೆನ್ನಲ್ಲೇ ಐದಾರು ಶಾಸಕರು ರಾಜೀನಾಮೆ ಸಲ್ಲಿಸಲಿದ್ದಾರೆ ಎಂಬ ನಿರೀಕ್ಷೆ ಇತ್ತು. ಆದರೆ ಮಂಗಳವಾರ ಯಾರೊಬ್ಬರೂ ರಾಜೀನಾಮೆ ಸಲ್ಲಿಸಿಲ್ಲ. ಈ ಮಧ್ಯೆ ರಾಯಚೂರು, ಬಳ್ಳಾರಿ ಜಿಲ್ಲೆಗೆ ಸೇರಿದ ಮೂವರು ಶಾಸಕರು ಬುಧವಾರ ಸ್ಪೀಕರ್‌ರನ್ನು ಭೇಟಿಯಾಗಲಿದ್ದಾರೆ ಎಂದು ಹೇಳಲಾಗುತ್ತಿದೆ. ಆನಂದ್ ಸಿಂಗ್ ರಾಜೀನಾಮೆ ಪತ್ರ ತಲುಪಿರುವುದನ್ನು ದೃಢಪಡಿಸಿರುವ ಸ್ಪೀಕರ್ ರಮೇಶ್ ಕುಮಾರ್ ಅವರು, ರಮೇಶ್ ಜಾರಕಿಹೊಳಿ ರಾಜೀನಾಮೆ ಪತ್ರ ತಲುಪಿಲ್ಲವೆಂದು ಸ್ಪಷ್ಟಪಡಿಸಿದ್ದಾರೆ. ಹೀಗಾಗಿ ರಮೇಶ್ ಜಾರಕಿಹೊಳಿ ಸಹ ಬುಧವಾರ ಸ್ಪೀಕರ್‌ರನ್ನು ಭೇಟಿಯಾಗಲಿದ್ದಾರೆ.